# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 423
ಸದಸ್ಯರ ಹೆಸರು : ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 16.02.2023.
ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಯವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಕ್ಕಳಿಗೆ ಸಂಬಂಧಿಸಿದ ದಾಖಲೆಗಳಾದ ಮಕ್ಕಳ ಜನನ ನೋಂದಣಿ, ತಾಯಿ ಮಕ್ಕಳ ಸಾವಿನ ಪ್ರಕರಣಗಳು, ಬಾಲ್ಯವಿವಾಹಗಳ ಬಗ್ಗೆ ಸಂಪೂರ್ಣ ವಿವರ, ಬಾಲಕಾರ್ಮಿಕ, ಅಂಗವಿಕಲರು, ಶಾಲೆಯಿಂದ ಹೊರಗುಳಿದ ಮಕ್ಕಳು ಹಾಗೂ ಇತ್ಯಾದಿ ವಿವರಗಳು ಲಭ್ಯವಿದೆಯೇ: (ಮಾಹಿತಿ ನೀಡುವುದು) | ಮಕ್ಕಳ ಜನನ ನೋಂದಣಿಯ ಪ್ರಮಾಣ ಪತ್ರದ ಪ್ರತಿಯನ್ನು ಗ್ರಾಮ ಪಂಚಾಯತಿಯ ಬಾಪೂಜಿ ಸೇವಾ ಕೇಂದ್ರ ಮೂಲಕ ನೀಡಲು ಅವಕಾಶವಿದೆ. ಗ್ರಾಮ ಪಂಚಾಯತಿ ದೂರದೃಷ್ಠಿ ಯೋಜನೆಯನ್ನು ಸಿದ್ಧಪಡಿಸುತ್ತಿದ್ದು, ತಾಯಿಂದಿರ ಮರಣ ಪ್ರಮಾಣ, ಮಕ್ಕಳ ಮರಣ ಪ್ರಮಾಣ, ಬಾಲ್ಯ ವಿವಾಹಗಳ ಪ್ರಕರಣಗಳು, ಬಾಲ ಕಾರ್ಮಿಕರು, ವಿಶೇಷ ಚೇತನರು, ಶಾಲೆಯಿಂದ ಹೊರಗುಳಿದ ಮಕ್ಕಳು ಇತ್ಯಾದಿ, ಮಹಿಳೆ ಮತ್ತು ಮಕ್ಕಳ ಅಭಿವೃದ್ಧಿಗೆ ಪೂರಕವಾದ ಸೂಚಕಗಳ ದ್ವಿತೀಯ ದತ್ತಾಂಶವನ್ನು ವಿವಿಧ ಅಭಿವೃದ್ಧಿ ಇಲಾಖೆಗಳ ಮೂಲಕ ಸಂಗ್ರಹಿಸಲಾಗುತ್ತಿದೆ. |
| (ಆ) | ಗ್ರಾಮ ಪಂಚಾಯತ್ ಮಟ್ಟದಲ್ಲಿ ಯಾವ ಯಾವ ಪ್ರತ್ಯೇಕ ಯೋಜನೆಗಳು ಜಾರಿಯಲ್ಲಿವೇ: | ಗ್ರಾಮ ಪಂಚಾಯತಿ ಮಟ್ಟದಲ್ಲಿ ಯಾವುದೇ ಪ್ರತ್ಯೇಕ ಯೋಜನೆಗಳು ಜಾರಿಯಲ್ಲಿರುವುದಿಲ್ಲ. |
| (ಇ) | ರಾಜ್ಯದಲ್ಲಿ ಇದುವರೆವಿಗೂ ಈ ಯೋಜನೆಗಳ ಪ್ರಯೋಜನ ಪಡೆದ ಒಟ್ಟು ಮಕ್ಕಳೆಷ್ಟು: | ಶಿಕ್ಷಣ ಹಕ್ಕು ಕಾಯ್ದೆ 2009 ರ ಸೆಕ್ಷನ್ 9 ಮತ್ತು ಶಿಕ್ಷಣ ಹಕ್ಕು ನಿಯಮಗಳು 2012 ರ ನಿಯಮ 6 ರಲ್ಲಿ ಸೂಚಿಸಿರುವಂತೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗ್ರಾಮ ಶಿಕ್ಷಣ ವಹಿಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳು ಹಾಗೂ ಇತರೆ ವಿವರಗಳನ್ನು ನಿರ್ವಹಿಸಲಾಗುತ್ತಿದೆ. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರಲು ಕ್ರಮ ವಹಿಸಲಾಗುತ್ತದೆ.<br><br>ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ರಡಿಯಲ್ಲಿ ಕಳೆದ 3 ವರ್ಷಗಳಲ್ಲಿ 1068 ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕರನ್ನು ರಕ್ಷಿಸಿ ಕೆಲಸದಿಂದ ಬಿಡುಗಡೆಗೊಳಿಸಿ ಮುಖ್ಯವಾಹಿನಿ ಶಾಲೆ ಮತ್ತು ಮಕ್ಕಳ ಕಲ್ಯಾಣ ಸಮಿತಿಗೆ ದಾಖಲಿಸುವ ಮೂಲಕ ಶಿಕ್ಷಣ ಮುಂದುವರಿಕೆಗೆ ಅವಕಾಶ ಮಾಡಿ ಪುನರ್ವಸತಿಗೊಳಿಸಲಾಗಿರುತ್ತದೆ. |

| | | |
|---|---|---|
| | | 2022ನೇ ಸಾಲಿನ ಜನವರಿಯಿಂದ ಡಿಸೆಂಬರ್ 31 ರವರೆಗೆ ಇ-ಜನ್ಮ ತಂತ್ರಾಂಶದಲ್ಲಿ ಒಟ್ಟು 1,68,151 ಜನನ ಪ್ರಕರಣಗಳು ನೋಂದಣಿಯಾಗಿದ್ದು, ಪ್ರಮಾಣ ಪತ್ರಗಳನ್ನು ವಿತರಿಸಲು ಕ್ರಮ ವಹಿಸಲಾಗಿದೆ.<br><br>ಏಪ್ರಿಲ್ 2022 ರಿಂದ ಜನವರಿ 2023 ರವೆಗೆ ಬಾಲ್ಯ ವಿವಾಹಕ್ಕೆ ಸಂಬಂಧಿಸಿದಂತೆ ಒಟ್ಟು 2,205 ದೂರುಗಳು ದಾಖಲಾಗಿದ್ದು, ಇದರಲ್ಲಿ 1,912 ಬಾಲ್ಯ ವಿವಾಹ ಪ್ರಕರಣಗಳನ್ನು ತಡೆಗಟ್ಟಲಾಗಿದೆ. 293 ಬಾಲ್ಯ ವಿವಾಹ ಪ್ರಕರಣಗಳು ನಡೆದಿದ್ದು, 236 ಪ್ರಕರಣಗಳಲ್ಲಿ ಪ್ರಥಮ ವರ್ತಮಾನ ವರದಿ (ಎಫ್.ಐ.ಆರ್) ದಾಖಲಿಸಲಾಗಿದೆ.<br><br>ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ 2021-22ನೇ ಸಾಲಿನಲ್ಲಿ 1868 ವಿಶೇಷ ಚೇತನ ಮಕ್ಕಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹ ಧನವನ್ನು ನೀಡಲಾಗಿರುತ್ತದೆ. 123 ಅಂಧ ತಾಯಂದಿರಿಗೆ ಶಿಶುಪಾಲನೆ ಮಾಡುವ ಸಲುವಾಗಿ ಶಿಶುಪಾಲನಾ ಭತ್ಯೆಯನ್ನು ನೀಡಲಾಗಿದೆ. 400 ಅಂಧ ವಿದ್ಯಾರ್ಥಿಗಳಿಗೆ ಬ್ರೈಲ್ ಕಿಟ್ ನೀಡಲಾಗಿದೆ. |
| (ಈ) | ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಹಿಳಾ ಮತ್ತು ಮಕ್ಕಳ ಕಾವಲು ಸಮಿತಿ ಸಭೆಗಳು ಸಮಯಕ್ಕೆ ತಕ್ಕಂತೆ ನಡೆಯುತ್ತಿದೆಯೇ: (ವಿವರ ನೀಡುವುದು) | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿ) ನಿಯಮಗಳು, 2020 ಅನ್ನು ರೂಪಿಸಲಾಗಿದೆ. ಸದರಿ ನಿಯಮಗಳಂತೆ ಸಮಿತಿಯು ಎರಡು ತಿಂಗಳಿಗೊಮ್ಮೆ ಅಥವಾ ಅಗತ್ಯವಿದ್ದಾಗ ಅದಕ್ಕೂ ಮೊದಲೆ ಸಭೆ ನಡೆಸಲು ಅವಕಾಶ ಕಲ್ಪಿಸಲಾಗಿದೆ.<br><br>2022-23ನೇ ಸಾಲಿನಲ್ಲಿ ನವೆಂಬರ್ 2022ರ ಅಂತ್ಯದವರೆಗೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟಲು ರಚಿಸಲಾದ ಕಾವಲು ಸಮಿತಿಗೆ ಸಂಬಂಧಿಸಿದಂತೆ 9,682 ಸಭೆಗಳನ್ನು ನಡೆಸಲಾಗಿದೆ. |

ಸಂಖ್ಯೆ: ಗ್ರಾಅಪ 97 ಗ್ರಾಪಂಅ 2023 (ಇ)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ